ಅಧ್ಯಕ್ಷರು: ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 26ರವರೆಗೆ; ಎರಡೂ ಸೇರಿದಂತೆ,

ಅಧ್ಯಕ್ಷರು ಪ್ರಸ್ತಾವ ಏನೆಂದರೆ: ಖಂಡ 2 ರಿಂದ 26ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 26ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರ: ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡು ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕ್ಕೆ ಸೇರಿಸಲ್ಪಟ್ಟಿತು

ಪ್ರಸ್ತಾಪ ಅಂಗೀಕಾರ

ಶ್ರೀ ಆರ್.ವಿ.ದೇಶಪಾಂಡೆ: (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಮಾನ್ಯ ಅಧ್ಯಕ್ಷರೇ " 2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ " 2003ರ ಕರ್ನಾಟಕ ವಿಶೇಷ ಆರ್ಥಿಕ ವಲಯಗಳ ಅಭಿವೃದ್ಧಿ ವಿಧೇಯಕವನ್ನು ಅಂಗೀಕರಿಸುವುದು". ಪ್ರಸ್ತಾವ ಅಂಗೀಕರಿಸ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಗೊಂದಲ

(ii) ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕ – 2003

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್.ವಿ.ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೇ, " 2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ".

ಪ್ರಸ್ತಾವವನ್ನು ಮಂಡಿಸಲಾಯಿತು

ಗೊಂದಲ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

" 2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರಿಗಣಿಸಲಾಯಿತು

ಖಂಡ 2 ರಿಂದ 11ರ ವರೆಗೆ, ಎರಡೂ ಸೇರಿದಂತೆ,

ಅಧ್ಯಕ್ಷರು: ಪ್ರಸ್ತಾವ ಏನೆಂದರೆ " ಖಂಡ 2 ರಿಂದ 11 ರ ವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 11 ರವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ವಿ.ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೇ, " 2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೆನೆ ".

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

" 2003ರ ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ ವಿಧೇಯಕವನ್ನು ಅಂಗೀಕರಿಸುವುದು "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ವೈದ್ಯಕೀಯ ನೊಂದಣಿ (ತಿದ್ದುಪಡಿ) ವಿಧೇಯಕ, 2003

ಪರ್ಯಾಲೋಚನಾ ಪ್ರಸ್ತಾವ

ಡಾ ಎ.ಬಿ.ಮಾಲಕರೆಡ್ಡಿ (ವೈದ್ಯ ಕೀಯ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೇ, '2003 ರ ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋವಚಿಸಬೇಕೆಂದು ಕೋರುತ್ತೇನೆ ".

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:

" 2003ರ ಕರ್ನಾಟಕ ವೈದ್ಯಕೀಯ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 8ರ ವರೆಗೆ: ಎರಡೂ ಸೇರಿದಂತೆ,